# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೊಟ್ಟಿಗೆರೆ ವಾರ್ಡ್ ಸಂಖ್ಯೆ: 194

**ವಾರ್ಡ್ ಕಛೇರಿಯಲ್ಲಿ ದಿನಾಂಕ: 21-05-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಹಾಜರಿದ್ದವರು

1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ವಾರ್ಡ್ ನಂ.194, ಬಿಬಿಎಂಪಿ
2. ವಾರ್ಡ್ ಅಭಿಯಂತರರು
3. ಆರೋಗ್ಯಾಧಿಕಾರಿಗಳು, ಗೊಟ್ಟಿಗೆರೆ.
4. ಕಂದಾಯ ಪರಿವೀಕ್ಷಕರು, ವಾರ್ಡ್ ನಂ.194, ಗೊಟ್ಟಿಗೆರೆ.
5. ತೋಟಗಾರಿಕೆ ಸಹಾಯಕರು, ಗೊಟ್ಟಿಗೆರೆ.
6. ಸಹಾಯಕ ಉಪ ನಿರೀಕ್ಷಕರು ಕಾನೂನು ಮತ್ತು ಸುವ್ಯವಸ್ಥೆ
7. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.194, ಗೊಟ್ಟಿಗೆರೆ.
8. ಸಹಾಯಕ ಅಭಿಯಂತರರು(ಬೆಸ್ಕಾಂ).
9. ಮಾರ್ಷಲ್, ವಾರ್ಡ್ ನಂ.194, ಗೊಟ್ಟಿಗೆರೆ.
10. ಅಧ್ಯಕ್ಷರು, ರಾಯಲ್ ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ
11. ಅಧ್ಯಕ್ಷರು, ಕ್ಲಾಸಿಕ್ ಆರ್ಚಡ್ಸ್ , ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ
12. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.
13. ಸೌತ್ ಅವಿನ್ಯೂ ಬಡಾವಣೆಯ ಪ್ರತಿನಿಧಿಗಳು
14. ಅಧ್ಯಕ್ಷರು ಸಾರಥಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.

ದಿನಾಂಕ: 21.05.2022 ರಂದು ಬೆಳಿಗ್ಗೆ 10.30 ಗಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್ ವ್ಯಾಪ್ತಿಯಲ್ಲಿ ಭಾರಿ ಮಳೆಯಿಂದ ಹಾನಿ ಆಗಿರುವ ಸ್ಥಳಗಳಲ್ಲಿ ಅಗತ್ಯ ಕಾರ್ಯವನ್ನು ವಹಿಸುವ ಬಗ್ಗೆ.

**i)** ಸಾರ್ವಜನಿಕರು ವೆಂಕಟೇಶ್ವರ ಲೇಔಟ್ ಹಾಗೂ ಸಾರಥಿನಗರದಲ್ಲಿರುವ ರಸ್ತೆ ಬದಿಯ ಚರಂಡಿಗಳಲ್ಲಿರುವ ಕಸವನ್ನು ತೆರವುಗೊಳಿಸಲು ಕೋರಿದ್ದು, ವಾರ್ಡ್ ಅಭಿಯಂತರರು ಈ ಸಂಬಂಧ ಅಗತ್ಯ ಕ್ರಮ ವಹಿಸುವುದು.

**ii)** ಪಾವಮಾನ ನಗರದ ಮುಖ್ಯ ರಸ್ತೆಯಲ್ಲಿ ಮರವು ಬಿದ್ದಿದ್ದು, ಸಾರ್ವಜನಿಕರೇ ಖುದ್ದು ರಸ್ತೆ ಬದಿಗೆ ತಳ್ಳಿರುವುದಾಗಿ ತಿಳಿಸಿದರು. ಅರಣ್ಯಾಧಿಕಾರಿಗಳು ಕೊಂಬೆಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸುವುದು.

ಮು.ತಿ.ನೋ

Scanned by CamScanner

2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಬಗ್ಗೆ.

i) ಕಳೆದ 10 ದಿನಗಳಿಂದ ಯಾವುದೇ ಕೋವಿಡ್-19 ಪ್ರಕರಣಗಳು ವಾರ್ಡ್‌ನಲ್ಲಿ ಪತ್ತೆಯಾಗಿರುವುದಿಲ್ಲ.

ii) ಮಳೆ ನೀರು ನಿಲ್ಲುವುದರಿಂದ ಡೆಂಗ್ಯೂ ಮತ್ತು ಮಲೇರಿಯಾ ಕಾಯಿಲೆಗಳು ಹೆಚ್ಚುತ್ತಿದ್ದು ಈ ಸಂಬಂಧ ಸಾರ್ವಜನಿಕರು/ ಆರ್‌ಡಬ್ಲ್ಯೂಎಗಳು ತಮ್ಮ ತಮ್ಮ ಮನೆ ಸುತ್ತ ಮುತ್ತಲು ಸ್ವಚ್ಛವಿಡಲು ಸಲಹೆ ನೀಡಿದ್ದು. ರೋಗ ಲಕ್ಷಣಗಳು ಕಂಡು ಬಂದಲ್ಲಿ ಕೂಡಲೆ ವೈದ್ಯರನ್ನು ಸಂಪರ್ಕಿಸಲು ಸೂಚಿಸಲಾಯಿತು.

1. ಘನತ್ಯಾಜ್ಯ ನಿರ್ವಹಣೆ ಬಗ್ಗೆ :-

i) ಗೊಟ್ಟಿಗೆರೆ ಸರ್ಕಾರಿ ಶಾಲೆ ಎದುರು ಹೊಸದಾಗಿ ಬ್ಲಾಕ್ ಸ್ಪಾಟ್ ಕಂಡು ಬಂದಿರುತ್ತದೆ. ಈ ಸಂಬಂಧ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯವನ್ನು ಪೂರ್ಣವಾಗಿ ತೆರವುಗೊಳಿಸಿ ಅಲ್ಲಿ ಸಾರ್ವಜನಿಕರು ಕಸ ಹಾಕದಂತೆ ಕ್ರಮ ವಹಿಸಲು ಸೂಚಿಸಲಾಯಿತು.

ii) ಗೊಟ್ಟಿಗೆರೆ ಮುಖ್ಯ ರಸ್ತೆಯ ಮೆಡಾಕ್ಸ್ ಆಸ್ಪತ್ರೆ ಎದುರು ಬಿ.ಕೆ ಸರ್ಕಲ್ ಬಸ್ ತಂಗುದಾಣದ ಪಕ್ಕ ಕ್ಲಾಸಿಕ್ ಆರ್ಚಡ್ ಎದುರು ಹಾಗೂ ಹಿಮಗಿರಿ ಮೆಡೋಸ್ ಪಕ್ಕದಲ್ಲಿ ಶೇಖರಗೊಂಡಿರುವ ಘನತ್ಯಾಜ್ಯವನ್ನು ತೆರವುಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

2. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

i) ಬಿ.ಕೆ. ಸರ್ಕಲ್ ಬಳಿ ವಿದ್ಯುತ್ ಕಂಬವು ಬಿದ್ದಿದ್ದು ಸದರಿ ಕಂಬವನ್ನು ತೆರವುಗೊಳಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು(ಬೆಸ್ಕಾಂ) ರವರು ಅಗತ್ಯ ಕ್ರಮ ವಹಿಸುವುದು.

ii) ಗೊಟ್ಟಿಗೆರೆ ಕೆರೆಯಲ್ಲಿ ಬಿಬಿಎಂಪಿಗೆ ಸಂಬಂಧಪಟ್ಟ ಬೋರ್ ವೆಲ್ ಅನ್ನು ದುರಸ್ಥಿಗೊಳಿಸಲು ಅಗತ್ಯ ಕ್ರಮ ವಹಿಸುವುದು.

3. ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

i) ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಸಭೆಗೆ ಹಾಜರಾಗಿರುವುದಿಲ್ಲ. ಈ ಹಿಂದೆ ಹಲವು ನೋಟೀಸ್ ಗಳನ್ನು ನೀಡಿದ್ದರೂ ಸಹ ನಿರ್ಲಕ್ಷ್ಯ ಮಾಡಿದ್ದು ಈ ಬಗ್ಗೆ ಮುಖ್ಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಪತ್ರ ಬರೆಯಲು ಸಮಿತಿಯ ಕಾರ್ಯದರ್ಶಿಗಳು ಕ್ರಮ ವಹಿಸುವುದು.

ii) ಪಾವಮಾನ ನಗರದ ಬಡಾವಣೆಯಲ್ಲಿ ಸುಮಾರು 80 ಮನೆಗಳಿಗೆ ಹೌಸ್ ಹೋಲ್ಡ್ ಕನೆಕ್ಷನ್ ನೀಡಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಅಗತ್ಯ ಕ್ರಮ ವಹಿಸುವುದು.

iii) ದಿನಾಂಕ: 07.05.2022 ರಂದು ನಡೆದ ಸಭೆಯ ನಡವಳಿಯ ವಿಷಯಗಳ ಬಗ್ಗೆ ಅನುಪಾಲನ ವರದಿಯನ್ನು ಮುಂದಿನ ಸಭೆಯಲ್ಲಿ ಖುದ್ದು ಹಾಜರಾಗಿ ಅನುಪಾಲನಾ ವರದಿಯನ್ನು ಸಲ್ಲಿಸುವುದು.

ಮು.ತಿ.ನೋ

Scanned by CamScanner

4. ಅಧ್ಯಕ್ಷರು ಕ್ಲಾಸಿಕ್ ಆರ್ಚಡ್ ರವರು ಮಾತನಾಡುತ್ತಾ ತಮ್ಮ ಬಡಾವಣೆಯಲ್ಲಿ ನಡೆಯುತ್ತಿರುವ ಘನತ್ಯಾಜ್ಯ ನಿರ್ವಹಣಾ ಘಟಕದ ಬಗ್ಗೆ ಪ್ರಸ್ತುತಿಯನ್ನು ಮುಂದಿನ ಸಭೆಯಲ್ಲಿ ನೀಡಲು ಪ್ರಸ್ತಾಪಿಸಿದರು. ಅಲ್ಲದೆ ಮಳೆ ನೀರಿನಿಂದ ಉಂಟಾಗುವ ಹಾನಿಯನ್ನು ತಡೆಗಟ್ಟುವ ಬಗ್ಗೆ ಮಳೆ ನೀರು ಕೊಯ್ಲು ಕಾರ್ಯಕ್ರಮವನ್ನು ವಿವಿಧ ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳಿಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಂದ ಪ್ರಸ್ತುತಿ ಪಡಿಸಲು ಕೋರಿದರು.

ಸಮಿತಿ ಕಾರ್ಯದರ್ಶಿಗಳು ವಿವಿಧ ಇಲಾಖೆಯ ಅಧಿಕಾರಿಗಳ ಸಮನ್ವಯದಲ್ಲಿ ಮುಂಬರುವ ಸಮಿತಿಯ ಸಭೆಯಲ್ಲಿ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ದಾಖಲಿತ ಉತ್ತಮ ಅಭ್ಯಾಸಗಳನ್ನು ಪ್ರಸ್ತುತ ಪಡಿಸಲು ಸೂಚಿಸಲಾಯಿತು.

ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
17. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
18. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
19. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
20. ಪೋಲೀಸ್ ಇನ್ಸ್ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
21. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
22. ಸ್ಥಳೀಯ ನಾಗರಿಕಕಲ್ಯಾಣ ಸಂಸ್ಥೆಗಳು.

Scanned by CamScanner